**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 103 ಗ್ರಾಪಂಸಿ 2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:21.11.2017

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತಿಗಳು,

ಮಾನ್ಯರೆ,

**ವಿಷಯ:** ರಾಜ್ಯದ ಗ್ರಾಮ ಪಂಚಾಯತಿಗಳ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳ ಆಯ್ಕೆ ಮತ್ತು ನೇಮಕಾತಿಗಾಗಿ ವಿಧಾನದ ಆದೇಶಕ್ಕೆ ತಿದ್ದೋಲೆ ಹೊರಡಿಸಿರುವ ಬಗ್ಗೆ.

**ಉಲ್ಲೇಖ:**
1) ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 103 ಗ್ರಾಪಂಸಿ 2016, ಬೆಂಗಳೂರು, ದಿನಾಂಕ: 02.11.2017
2) ಸರ್ಕಾರದ ಇದೇ ಸಮಸಂಖ್ಯೆಯ ಪತ್ರ ದಿನಾಂಕ 08.11.2017
3) ಸರ್ಕಾರದ ತಿದ್ದೋಲೆ ಸಂಖ್ಯೆ ಗ್ರಾಅಪ 103 ಗ್ರಾಪಂಸಿ 2016, ಬೆಂಗಳೂರು, ದಿನಾಂಕ: 20.11.2017

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸರ್ಕಾರದ ಆದೇಶದಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಹೊಸದಾಗಿ ಒಂದು ಡಾಟಾ ಎಂಟ್ರಿ ಆಪರೇಟರ್ ಹುದ್ದೆ ಸೃಜಿಸಿ ನೇಮಕಾತಿ ವಿಧಾನ ನಿರ್ದಿಷ್ಟಪಡಿಸಲಾಗಿದೆ. ಅದರಂತೆ ಉಲ್ಲೇಖ (2) ರ ಸರ್ಕಾರದ ಪತ್ರದಲ್ಲಿ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳ ಆಯ್ಕೆ ಮತ್ತು ನೇಮಕಾತಿಗಾಗಿ ಅರ್ಜಿ ನಮೂನೆ ಮತ್ತು ವೇಳಾ ಪಟ್ಟಿ ಹಾಗೂ ಪತ್ರಿಕಾ ಪ್ರಕಟಣೆ ವಿವರವನ್ನು ಕಳುಹಿಸಿ ಸದರಿ ವೇಳಾ ಪಟ್ಟಿಯಂತೆ ಮತ್ತು ಉಲ್ಲೇಖ (1) ರ ಸರ್ಕಾರದ ಆದೇಶದಂತೆ ಗ್ರಾಮ ಪಂಚಾಯತಿಗಳ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ನಿಗದಿತ ಅವಧಿಯೊಳಗೆ ಆಯ್ಕೆ ಮಾಡಿ ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲು ತಿಳಿಸಲಾಗಿದೆ.

ಉಲ್ಲೇಖ (3) ರ ತಿದ್ದೋಲೆಯಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಹೊಸದಾಗಿ ಒಂದು ಡಾಟಾ ಎಂಟ್ರಿ ಆಪರೇಟರ್ ಹುದ್ದೆ ಸೃಜಿಸಿ ನೇಮಕಾತಿ ವಿಧಾನ ನಿರ್ದಿಷ್ಟಪಡಿಸಿ ಹೊರಡಿಸಿರುವ ಉಲ್ಲೇಖ (1) ರ ಆದೇಶವನ್ನು ಭಾಗಶಃ ಮಾರ್ಪಡಿಸಿ ತಿದ್ದೋಲೆ ಹೊರಡಿಸಲಾಗಿದೆ. ಈ ತಿದ್ದೋಲೆಯ ಅಂಶಗಳನ್ನು ಅಳವಡಿಸಿಕೊಂಡು ಆಯ್ಕೆ ಪ್ರಕ್ರಿಯೆ ನಡೆಸಲು ಈ ಮೂಲಕ ತಿಳಿಸಿದೆ. ಪ್ರಸ್ತುತ ತಿದ್ದೋಲೆಯಂತೆ ಆಯ್ಕೆ ಪ್ರಕ್ರಿಯೆ ನಡೆಸುವ ಸಲುವಾಗಿ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ದಿನಾಂಕವನ್ನು ಇನ್ನು 15 ದಿನಗಳವರೆಗೆ ವಿಸ್ತರಿಸಲು ಹಾಗೂ ಈ ಸಂಬಂಧ ಬದಲಾದ ವಿಧಾನ ಮತ್ತು ನಿಯಮಗಳನ್ನು ಪರಿಷ್ಕೃತ ಪತ್ರಿಕಾ ಪ್ರಕಟಣೆ ಮೂಲಕ ತಿಳಿಯಪಡಿಸಲು ತಿಳಿಸಿದೆ. ಉಳಿದಂತೆ ಉಲ್ಲೇಖ (1) ರಿಂದ (3) ರಂತೆ ಗ್ರಾಮ ಪಂಚಾಯತಿಗಳ ಡಾಟಾ ಎಂಟ್ರಿ ಆಪರೇಟರ್‌ಗಳ ಆಯ್ಕೆ ಪ್ರಕ್ರಿಯೆಯ ಪೂರ್ಣಗೊಳಿಸಲು ಎಲ್ಲಾ ಅವಶ್ಯ ಕ್ರಮ ಕೈಗೊಳ್ಳುವಂತೆ ಈ ಮೂಲಕ ಕೋರಿದೆ.

ತಮ್ಮ ನಂಬುಗೆಯ,

21/11/2017

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.**

1) ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
3) ವಿಶೇಷ ಅಧಿಕಾರಿ, ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರಿಗೆ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 103 ಗ್ರಾಪಂಸಿ 2016

ಕರ್ನಾಟಕ ಸರ್ಕಾರದ ಸಚಿವಾಲಯ.
ಬಹುಮಹಡಿಗಳ ಕಟ್ಟಡ.
ಬೆಂಗಳೂರು, ದಿನಾಂಕ: 20-11-2017

**ತಿದ್ದೋಲೆ**

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 103 ಗ್ರಾಪಂಸಿ 2016, ದಿನಾಂಕ:02-11-2017 ರಂದು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಹೊಸದಾಗಿ ಒಂದು ಡಾಟಾ ಎಂಟ್ರಿ ಆಪರೇಟರ್ ಹುದ್ದೆ ಸೃಜಿಸಿ ನೇಮಕಾತಿ ವಿಧಾನ ನಿರ್ದಿಷ್ಟಪಡಿಸಿ ಹೊರಡಿಸಿರುವ ಆದೇಶವನ್ನು ಭಾಗಶ: ಮಾರ್ಪಡಿಸಿ ಈ ಕೆಳಕಂಡಂತೆ ತಿದ್ದೋಲೆ ಹೊರಡಿಸಿದ್ದು, ಅದರಂತೆ ಓದಿಕೊಳ್ಳತಕ್ಕದ್ದು.

1. ನೇಮಕಾತಿಗೆ ಅರ್ಹತೆಯಡಿ ವಿದ್ಯಾರ್ಹತೆ ಕಾಲಂನ ಕ್ರಮ ಸಂಖ್ಯೆ: 3 ರಲ್ಲಿ ಗ್ರಾಮ ಪಂಚಾಯತಿಗಳಲ್ಲಿ ಪ್ರಸ್ತುತ ಡಾಟಾ ಎಂಟ್ರಿ ಆಪರೇಟರ್, ವಾಟರ್‌ಮನ್ / ಪಂಪ್ ಆಪರೇಟರ್ / ಪಂಪ್ ಮೆಕಾನಿಕ್, ಅಟೆಂಡರ್ ಮತ್ತು ಸ್ವಚ್ಛತಾಗಾರ ವೃಂದಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರು ಮೇಲೆ ಹೇಳಿದ ಅರ್ಹತೆ ಹೊಂದಿದ್ದು, ಈ ನೇಮಕಾತಿಗಾಗಿ ಅರ್ಜಿ ಸಲ್ಲಿಸಿದ್ದಲ್ಲಿ ಅವರು ಸಲ್ಲಿಸಿದ ಸೇವೆಯ ಪ್ರತಿ ಒಂದು ವರ್ಷಕ್ಕೆ 3 ರಷ್ಟು ಅಂಕಗಳ weightage ನೀಡುವುದು

   ಎಂಬುದರ ಬದಲು

   ಗ್ರಾಮ ಪಂಚಾಯತಿಗಳಲ್ಲಿ ಪ್ರಸ್ತುತ ಡಾಟಾ ಎಂಟ್ರಿ ಆಪರೇಟರ್, ವಾಟರ್‌ಮನ್ / ಪಂಪ್ ಆಪರೇಟರ್ / ಪಂಪ್ ಮೆಕಾನಿಕ್, ಅಟೆಂಡರ್ ಮತ್ತು ಸ್ವಚ್ಛತಾಗಾರ ವೃಂದಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರು ಮತ್ತು ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿಗಳಲ್ಲಿ ತಾತ್ಕಾಲಿಕ/ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಪ್ರಸ್ತುತ ಸೇವೆ ಸಲ್ಲಿಸುತ್ತಿದ್ದು ಮೇಲೆ ಹೇಳಿದ ಅರ್ಹತೆ ಹೊಂದಿದ್ದು, ಈ ನೇಮಕಾತಿಗಾಗಿ ಅರ್ಜಿ ಸಲ್ಲಿಸಿದ್ದಲ್ಲಿ ಅವರು ಸಲ್ಲಿಸಿದ ಸೇವೆಯ ಪ್ರತಿ ಒಂದು ವರ್ಷಕ್ಕೆ ಶೇಕಡ 3 ರಷ್ಟು weightage ನೀಡುವುದು.
2. ಆಯ್ಕೆ ವಿಧಾನದ ಕ್ರಮ ಸಂಖ್ಯೆ:4 ರಲ್ಲಿ ಪಿಯುಸಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಗಳನ್ನು ಮಾತ್ರ ಪರಿಗಣಿಸಿ ಮೆರಿಟ್ ಆಧಾರದ ಮೇಲೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿ

   ಎಂಬುದರ ಬದಲು

   ಪಿ.ಯು.ಸಿ. ಅಥವಾ ತತ್ಸಮಾನ ಪರೀಕ್ಷೆ (ಐ.ಟಿ.ಐ. ಅಥವಾ 3 ವರ್ಷದ ಡಿಪ್ಲೋಮೊ ಕೋರ್ಸ್) ಯ ಶೇಕಡವಾರು ಅಂಕಗಳನ್ನು ಪರಿಗಣಿಸಿ ಮೆರಿಟ್ ಆಧಾರದ ಮೇಲೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸುವುದು.
3. ಆಯ್ಕೆ ವಿಧಾನದ ಕ್ರಮ ಸಂಖ್ಯೆ:4 ರಲ್ಲಿ ಪ್ರತಿ ವರ್ಷ ಸಲ್ಲಿಸಿದ ಸೇವಾ ಅವಧಿಗೆ 3 ರಷ್ಟು weightage ಅಂಕಗಳನ್ನು ನೀಡುವುದು

   ಎಂಬುದರ ಬದಲು

   ಪ್ರತಿ ವರ್ಷ ಸಲ್ಲಿಸಿದ ಸೇವಾ ಅವಧಿಗೆ ಶೇಕಡ 3 ರಷ್ಟು weightage ನೀಡುವುದು.

   ಉದಾ:- ಅಭ್ಯರ್ಥಿಯು ಪಿಯುಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಶೇ.50 ರಷ್ಟು ಅಂಕಗಳನ್ನು ಪಡೆದಿದ್ದರೆ, ಐದು ವರ್ಷಗಳ ಸೇವೆ ಸಲ್ಲಿಸಿದ್ದಲ್ಲಿ ಶೇಕಡ 15 ರಷ್ಟು weightage ನೀಡಿದಾಗ ಶೇ.65 ಆಗುತ್ತದೆ. ಅದೇ ಅಭ್ಯರ್ಥಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ಥಳೀಯ ನಿವಾಸಿಯಾಗಿದ್ದಲ್ಲಿ ಹೆಚ್ಚುವರಿ ಶೇಕಡಾ 5 ರಷ್ಟು weightage ನೀಡಿದಲ್ಲಿ, ಒಟ್ಟಾರೆ ಶೇ.70 ಆಗುತ್ತದೆ.
4. ಕ್ರಮ ಸಂಖ್ಯೆ 1 ರಂತೆ ಹಾಲಿ ಗ್ರಾಮ ಪಂಚಾಯತಿ/ತಾಲ್ಲೂಕು ಪಂಚಾಯಿತಿ/ಜಿಲ್ಲಾ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು ಈ ಹುದ್ದೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ಥಳೀಯ ನಿವಾಸಿಗಳಾಗಿದ್ದಲ್ಲಿ ಹೆಚ್ಚುವರಿಯಾಗಿ ಶೇಕಡ 5 ರಷ್ಟು weightage ನೀಡುವುದು.

5. ಆಯ್ಕೆ ವಿಧಾನದ ಕ್ರಮ ಸಂಖ್ಯೆ 8 ರಲ್ಲಿ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯ ಸಮಿತಿ ಅನುಮೋದನೆ ಇಲ್ಲದೆ ಗ್ರಾಮ ಪಂಚಾಯಿತಿಯು ಮಾಡುವ ಯಾವುದೇ ನೇಮಕಾತಿಯು ಅಸಿಂಧುವಾಗುತ್ತದೆ. ಇಂತಹ ಅಕ್ರಮ ನೇಮಕಾತಿ ಮಾಡಿದಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯನ್ನು ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮ ಜರುಗಿಸಲಾಗುವುದು

ಎಂಬುದರ ಬದಲು

ಈ ಆಯ್ಕೆ ಪ್ರಕ್ರಿಯೆಯಲ್ಲಿ ನಿಯಮಾನುಸಾರ ಆಯ್ಕೆಯಾಗಿ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯ ಸಮಿತಿ ಅನುಮೋದನೆ ಇಲ್ಲದೆ ಗ್ರಾಮ ಪಂಚಾಯಿತಿಯು ನೇರವಾಗಿ ನೇಮಕಾತಿ ಮಾಡಿಕೊಂಡಲ್ಲಿ ಆ ನೇಮಕಾತಿಯು ಅಸಿಂಧುವಾಗುತ್ತದೆ. ಅಂತಹ ಅಕ್ರಮ ನೇಮಕಾತಿಗೆ ಕಾರಣರಾಗುವ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು.

6. ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ನೇಮಕಗೊಂಡ ಅಭ್ಯರ್ಥಿಗಳಿಗೆ ಕಾರ್ಮಿಕ ಇಲಾಖೆ ನಿಗದಿಪಡಿಸುವ ಕನಿಷ್ಠ ವೇತನ ಮತ್ತು ತುಟ್ಟಿಭತ್ಯೆ ಹಾಗೂ ದಿನಾಂಕ: 02-11-2017 ರ ಸರ್ಕಾರದ ಆದೇಶದಂತೆ ಇನ್ನಿತರೆ ಸೌಲಭ್ಯಗಳನ್ನು ನೀಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
28/11/2017
(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು / ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ರವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ.
6. ವಿಶೇಷ ಅಧಿಕಾರಿ, (ಜಿ.ಪಂ.) ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
7. ಅಧ್ಯಕ್ಷರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಕಾರಿ/ನೌಕರರ ಸಂಘ (ರಿ), ಗಾಂಧಿನಗರ, ಬೆಂಗಳೂರು.
8. ಅಧ್ಯಕ್ಷರು, ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘ (ಸಿ.ಐ.ಟಿ.ಯು), ಸಂಪಂಗಿರಾಮನಗರ, ಬೆಂಗಳೂರು.
9. ಕಾರ್ಯಾಧ್ಯಕ್ಷರು, ಕರ್ನಾಟಕ ಪಂಚಾಯತ್ ಪರಿಷತ್, ನಂ.186/6, ಶಿರೂರು ಪಾರ್ಕ್ ರಸ್ತೆ, ನಟರಾಜ ಟಾಕೀಸ್ ಎದುರು, ಶೇಷಾದ್ರಿಪುರಂ, ಬೆಂಗಳೂರು-560020.
10. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
11. ಮಾಹಿತಿ ಕೇಂದ್ರ/ಇಲಾಖಾ ವೆಬ್‌ಸೈಟ್.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.